ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಶುಕ್ರವಾರ, ದಿನಾಂಕ : 06 ನೇ ಮಾರ್ಚ್, 2020

ಕಳೆದ 3 ವರ್ಷಗಳಲ್ಲಿ ಮಂಜೂರಾದ ಶುದ್ಧ ನೀರಿನ ಘಟಕಗಳ ಕುರಿತು

ಶ್ರೀ ಹೆಚ್. ಎಂ. ರಮೇಶ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು):-

334 (378) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಳೆದ ಮೂರು ವರ್ಷಗಳಲ್ಲಿ ರಾಜ್ಯದಲ್ಲಿ ಮಂಜೂರಾಗಿರುವ ಶುದ್ಧ ಕುಡಿಯುವ ನೀರಿನ ಘಟಕಗಳೆಷ್ಟು ; ಪ್ರಸಕ್ತ ಸಾಲಿನಲ್ಲಿ ಎಷ್ಟು ಘಟಕಗಳಿಗೆ ಮಂಜೂರಾತಿ ನೀಡಿ ಕಾಮಗಾರಿ ಪ್ರಾರಂಭಿಸಲಾಗಿದೆ; (ಜಿಲ್ಲಾವಾರು ವಿವರ ನೀಡುವುದು)

(ಆ) ತುಮಕೂರು ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳ ಗ್ರಾಮೀಣ ಪ್ರದೇಶಗಳಲ್ಲಿ ಫ್ಲೋರೈಡ್ ಯುಕ್ತ ನೀರಿನಿಂದ ಜನ ಆರೋಗ್ಯದ ಸಮಸ್ಯೆಗಳಿಗೆ ತುತ್ತಾಗುತ್ತಿರುವ ಹಿನ್ನೆಲೆಯಲ್ಲಿ ಆ ಭಾಗಗಳಲ್ಲಿ ಕುಡಿಯುವ ಶುದ್ಧ ನೀರಿನ ಘಟಕ ಸ್ಥಾಪನೆಗೆ ಸರ್ಕಾರ ಯಾವ ಕ್ರಮಕೈಗೊಂಡಿದೆ ; (ವಿವರ ನೀಡುವುದು)

(ಇ) ರಾಜ್ಯದ ಬರಪೀಡಿತ ಹಾಗೂ ಮಳೆ ನೆರಳಿನ ಪ್ರದೇಶಗಳಾದ ತುಮಕೂರಿನ ಬಹುತೇಕ ತಾಲ್ಲೂಕುಗಳಲ್ಲಿ ಎಷ್ಟು ಶುದ್ಧ ಕುಡಿಯುವ ನೀರಿನ ಘಟಕ ಸ್ಥಾಪಿಸಲಾಗಿದೆ ; ಇವುಗಳಲ್ಲಿ ಎಷ್ಟು ಘಟಕಗಗಳು ಕಾರ್ಯನಿರ್ವಹಿಸುತ್ತಿವೆ ಹಾಗೂ ಎಷ್ಟು ಘಟಕಗಳು ನಿರ್ವಹಣೆ ಇಲ್ಲದೆ ಸಂಪೂರ್ಣ ಹಾಳಾಗಿವೆ ; ಇವುಗಳ ದುರಸ್ಥಿಗೆ ಯಾವ ಕ್ರಮ ಕೈಗೊಳ್ಳಲಾಗಿದೆ ? (ವಿವರ ಸಹಿತ ಮಾಹಿತಿ ನೀಡುವುದು)